ಕೈಗಾರಿಕಾ ತರಬೇತಿ ಸಂಸ್ಥೆ

544 (796) ಶ್ರೀ ಚಿಕ್ಕನಗೌಡ್ರ ಸಿದ್ದನಗೌಡ ಈಶ್ವರಗೌಡ (ಕುಂದಗೋಳ) : ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಧಾರವಾಡ ಜಿಲ್ಲೆಯ ಕುಂದಗೋಳ ಮತಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಹುಬ್ಬಳ್ಳಿ ತಾಲ್ಲೂಕಿನ ಅದರಗುಂಚೆ ಗ್ರಾಮದಲ್ಲಿ ಹೊಸದಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಪ್ರಾರಂಭಿಸಲು ಆಯುಕ್ತರು, ಉದ್ಯೋಗ ಮತ್ತು ತರಬೇತಿ ಇಲಾಖೆ ಇವರ ಪತ್ರ ಸಂಖ್ಯೆ ಉತನಿ/ತ/ಯೋ–2/ವಿವ–13/2009–10 ದಿನಾಂಕ:15–01–2010ರನ್ವಯ ಸರ್ಕಾರಿ ಆದೇಶ ಹೊರಡಿಸಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಇದುವರೆಗೆ ಪ್ರಾರಂಭಿಸದೇ ಇರಲು ಕಾರಣಗಳೇನು?

ಇ) 2012ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ಪ್ರಾರಂಭಿಸಲು ಸರ್ಕಾರದ ಯೋಜನೆಯಲ್ಲಿದೆಯೇ?

ಈ) ಸಾಧ್ಯವಿದ್ದಲ್ಲಿ, ಯಾವಾಗ ಪ್ರಾರಂಭ ಮಾಡಲಾಗುವುದು?

ಉ) ಸಾಧ್ಯವಿಲ್ಲದಿದ್ದಲ್ಲಿ ಕಾರಣಗಳೇನು?

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು) :

ಅ) ಹುಬ್ಬಳ್ಳಿ ತಾಲ್ಲೂಕಿನ ಅದರಗುಂಚೆ ಗ್ರಾಮದಲ್ಲಿ ಹೊಸದಾಗಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಪ್ರಾರಂಭಿಸಲು ಸರ್ಕಾರದಿಂದ ವಿಧ್ಯುಕ್ತ ಸರ್ಕಾರಿ ಆದೇಶ ಜಾರಿಯಾಗಿರುವುದಿಲ್ಲ. ದಿನಾಂಕ: 15–01–2010 ರಲ್ಲಿ ಕೇವಲ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತೆಂದು ದಿನಾಂಕ:16–02–2010ರ ಪತ್ರದಲ್ಲಿ ಆಯುಕ್ತರು, ಉದ್ಯೋಗ ಮತ್ತು ತರಬೇತಿ ಇಲಾಖೆ, ಇವರಿಂದ ತಿದ್ದೋಲೆ (corrigendum) ಹೊರಡಿಸಲಾಗಿದೆ ಎನ್ನುವುದಾಗಿ ಆಯುಕ್ತರು ಸರ್ಕಾರಕ್ಕೆ ತಿಳಿಸಿರುತ್ತಾರೆ.

ಆ) 2008–09ನೇ ಸಾಲಿನಲ್ಲಿ 10 ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಹೊಸದಾಗಿ ಪ್ರಾರಂಭಿಸಿದ್ದು, ತದನಂತರ ಅನುದಾನ ಲಭ್ಯವಿಲ್ಲದ ಕಾರಣ ಯಾವುದೇ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಪ್ರಾರಂಭಿಸಲು ಸಾಧ್ಯವಾಗಿರುವುದಿಲ್ಲ.

ಇ) ಇಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ಐ.ಟಿ.ಐ. ಕಾಲೇಜು

612 (924) ಶ್ರೀ ಶ್ರೀನಿವಾಸ್. ಎಂ (ಮಂಡ್ಯ) : ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಡ್ಯ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯ ಬಸರಾಳು ಗ್ರಾಮವು ಹೋಬಳಿ ಕೇಂದ್ರವಾಗಿದ್ದು, ಶೈಕ್ಷಣಿಕವಾಗಿ ಹಿಂದುಳಿದ ಹೋಬಳಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಸದರಿ ಗ್ರಾಮದಲ್ಲಿ ಮುಂದಿನ ಶೈಕ್ಷಣಿಕ ವರ್ಷದಲ್ಲಿ ಐ.ಟಿ.ಐ. ಕಾಲೇಜನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಇ) ಹಾಗಿದ್ದಲ್ಲಿ, ಯಾವಾಗ ಪ್ರಾರಂಭಿಸಲಾಗುವುದು? (ಪೂರ್ಣ ಮಾಹಿತಿ ನೀಡುವುದು);

ಶ್ರೀ ಬಿ.ಎನ್. ಬಚ್ಚೇಗೌಡ (ಕಾರ್ಮಿಕ ಸಚಿವರು) :

ಅ) ಹೌದು ಸರ್ಕಾರದ ಗಮನಕ್ಕೆ ಬಂದಿರುತ್ತದೆ.

ಆ) ಸದರಿ ಗ್ರಾಮದಲ್ಲಿ ಮುಂದಿನ ಶೈಕ್ಷಣಿಕ ವರ್ಷದಲ್ಲಿ ಐ.ಟಿ.ಐ ಕಾಲೇಜನ್ನು ಪ್ರಾರಂಭಿಸುವ ಪ್ರಸ್ತಾವನೆ ಸರ್ಕಾರದ ಮುಂದಿರುವುದಿಲ್ಲ. ಪ್ರಸ್ತುತ ರಾಜ್ಯದಲ್ಲಿ 53 ತಾಲ್ಲೂಕುಗಳಲ್ಲಿ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳನ್ನು ಈವರೆಗೆ ತೆರೆದಿರುವುದಿಲ್ಲ. ಮಂಡ್ಯ ಜಿಲ್ಲೆಯಲ್ಲಿ ಈಗಾಗಲೇ 10 ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಗಳು ಮತ್ತು 4 ಖಾಸಗಿ ಅನುದಾನಿತ ಕೈಗಾರಿಕಾ ಅನುದಾನ ರಹಿತ ಖಾಸಗಿ ಕೈಗಾರಿಕಾ ತರಬೇತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ. ಮಂಡ್ಯ ತಾಲ್ಲೂಕಿನಲ್ಲಿ 1 ಸರ್ಕಾರಿ ಮತ್ತು 3 ಅನುದಾನಿತ ಮತ್ತು 6 ಅನುದಾನರಹಿತ ಕೈಗಾರಿಕಾ ತರಬೇತಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿರುತ್ತವೆ. ಈ ಮೂಲಕ ಮಂಡ್ಯ ತಾಲ್ಲೂಕಿನ ಬಸರಾಳು ಗ್ರಾಮದ ಭಾಗದ ಯುವಕ ಯುವತಿಯವರಿಗೆ ಕೌಶಲ್ಯ ತರಬೇತಿ ಪಡೆದು ಉದ್ಯೋಗಾವಕಾಶಗಳನ್ನು ಪಡೆಯಲು ಅವಕಾಶ ಕಲ್ಪಿಸಿದೆ.